ವ್ಯವಸ್ಥಾಪಕ ನಿರ್ದೇಶಕರ ಕಛೇರಿ
ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ

ಕರ್ನಾಟಕ ಸರ್ಕಾರ

ಕಾವೇರಿ ಭವನ, 9ನೇ ಮಹಡಿ,ಇ ಮತ್ತು ಎಫ್ ಬ್ಲಾಕ್,
ಕೆ.ಜಿ.ರಸ್ತೆ, ಬೆಂಗಳೂರು–560 009
ದೂರವಾಣಿ : 080 2311 8888 ಫ್ಯಾಕ್ಸ್: 080 2234 7317
ಇ–ಮೇಲ್ : rgrhcl@rediffmail.com

MD RGRHCL 04 PGG 01 2018-19 Date: 24.05.2018

ರಿಗೆ,
ರಾಜ್ಯದ ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು
ಜಿಲ್ಲಾ ಪಂಚಾಯಿತಿ
ರಾಜ್ಯದ ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು
ತಾಲ್ಲೂಕು ಪಂಚಾಯಿತಿ

ಮಾನ್ಯರೇ,

ವಿಷಯ : ಪ್ರಧಾನಮಂತ್ರಿ ಆವಾಸ್ ಯೋಜನೆ (ಗ್ರಾಮೀಣ) ಅಡಿಯಲ್ಲಿ ಆಡಳಿತಾತ್ಮಕ ವೆಚ್ಚಕ್ಕಾಗಿ ಬಿಡುಗಡೆ ಮಾಡಲಾದ ಅನುದಾನಕ್ಕನುಗುಣವಾಗಿ ನಿಗಮದಿಂದಲೇ ಕ್ರಿಯಾ ಯೋಜನೆ ತಯಾರಿಸುವ ಬಗ್ಗೆ

ಉಲ್ಲೇಖ : ಪ್ರಧಾನಮಂತ್ರಿ ಆವಾಸ್ ಯೋಜನೆ (ಗ್ರಾಮೀಣ) ಅಡಿ ಕೇಂದ್ರ ಸರ್ಕಾರದಿಂದ ಹೊರಡಿಸಲಾದ ಮಾರ್ಗಸೂಚಿಗಳು

************

ಪ್ರಧಾನಮಂತ್ರಿ ಆವಾಸ್ ಯೋಜನೆ (ಗ್ರಾ) (ಇಂದಿರಾ ಆವಾಸ್ ಯೋಜನೆ) ಯಡಿಯಲ್ಲಿ 2013-14ನೇ ಸಾಲಿನಿಂದ ಆಡಳಿತಾತ್ಮಕ ವೆಚ್ಚಕ್ಕಾಗಿ ಪ್ರತಿಶತ 4 ರಷ್ಟು ಅನುದಾನವನ್ನು ಪ್ರತ್ಯೇಕವಾಗಿ ಬಿಡುಗಡೆ ಮಾಡಲಾಗಿರುತ್ತದೆ. ಸದರಿ ಅನುದಾನವನ್ನು ಖರ್ಚು ಮಾಡುವ ಸಂಬಂಧವಾಗಿ ನಿಗಮದಿಂದಲೇ ಕ್ರಿಯಾ ಯೋಜನೆಯನ್ನು ತಯಾರಿಸಿ ಈಗಾಗಲೇ ನೀಡಲಾಗಿದ್ದರೂ ಸಹ ಬಹಳಷ್ಟು ಜಿಲ್ಲೆಗಳು ಅನುದಾನವನ್ನು ಖರ್ಚು ಮಾಡದೇ ಇರುವುದು ಕಂಡು ಬಂದಿರುತ್ತದೆ.

ಆಡಳಿತಾತ್ಮಕ ವೆಚ್ಚಕ್ಕಾಗಿ ಬಿಡುಗಡೆ ಮಾಡಲಾದ ಅನುದಾನವನ್ನು ಖರ್ಚು ಮಾಡದೇ ಇರುವುದರಿಂದ 2016-17ನೇ ಸಾಲಿನ 2ನೇ ಕಂತಿನ ಅನುದಾನ ಮತ್ತು 2017-18ನೇ ಸಾಲಿನ ಆಡಳಿತಾತ್ಮಕ ವೆಚ್ಚದ ಅನುದಾನವನ್ನು ಕೇಂದ್ರ ಸರ್ಕಾರದಿಂದ ಬಿಡುಗಡೆ ಮಾಡಿರುವುದಿಲ್ಲ. ಆದಾಗ್ಯೂ, ಸುಮಾರು ರೂ. 76.85 ಕೋಟಿಯಷ್ಟು ಅನುದಾನವು ಖರ್ಚಾಗದೇ ಉಳಿದಿರುತ್ತದೆ. ಈ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ನಿಗಮದಿಂದಲೇ 2018-19ನೇ ಸಾಲಿಗೆ ರೂ 73.85 ಕೋಟಿಗಳ ಕ್ರಿಯಾ ಯೋಜನೆಯನ್ನು ತಯಾರಿಸಿ ಈ ಪತ್ರದೊಂದಿಗೆ ಲಗತ್ತಿಸಿದೆ. ಸದರಿ ಕ್ರಿಯಾ ಯೋಜನೆಯಂತೆ KTPP act ಪ್ರಕಾರ ಅನುದಾನವನ್ನು ಖರ್ಚು ಮಾಡಲು ಕೋರಿದೆ. ಒಂದು ವೇಳೆ ಕ್ರಿಯಾ ಯೋಜನೆಯನ್ನು ಹೊರತುಪಡಿಸಿ ಜಿಲ್ಲೆಗಳು ಯಾವುದಾದರೂ ಬೇರೆ ವಿಷಯಗಳಿಗೆ ಕೇಂದ್ರ ಸರ್ಕಾರದ ಮಾರ್ಗಸೂಚಿಯಂತೆ ಖರ್ಚು ಮಾಡಲು ಇಚ್ಚಿಸಿದ್ದಲ್ಲಿ ಪ್ರಸ್ತಾವನೆಯನ್ನು ನಿಗಮಕ್ಕೆ ಸಲ್ಲಿಸಿ ಅನುಮೋದನೆ ಪಡೆದುಕೊಳ್ಳಬಹುದಾಗಿದೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ

(ವಿ.ಅನ್ಬುಕುಮಾರ್)
ವ್ಯವಸ್ಥಾಪಕ ನಿರ್ದೇಶಕರು

ಪ್ರತಿಯನ್ನು: ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ವಸತಿ ಇಲಾಖೆ, ವಿಕಾಸ ಸೌಧ, ಬೆಂಗಳೂರು ಇವರ ಮಾಹಿತಿಗಾಗಿ ಸಲ್ಲಿಸಿದೆ.